ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/02/ಸಿಡಿಸಿ(2)/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:12/01/2022.

## : ಜ್ಞಾಪನ :

ವಿಷಯ:- ಸಂಸ್ಥೆಯಲ್ಲಿ ಅಲ್ಪಾವಧಿ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲು ಅನುಮತಿ ನೀಡುವ ಕುರಿತು.

ಉಲ್ಲೇಖ:- ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ, ಇವರ ಕಛೇರಿ ಪತ್ರ ಸಂಖ್ಯೆ: ಸಇಕಾಹಾ/40/ಇಎಸ್‌ಟಿ/2021-22/544, ದಿನಾಂಕ: 01/01/2022.

-0-0-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಬೆಂಗಳೂರು. ಇವರ ಸಹಯೋಗದೊಂದಿಗೆ ದಿನಾಂಕ: 05/01/2022 ರಿಂದ 08/01/2022 ರವರೆಗೆ " Electrical Vehicle Technology " ಎಂಬ ವಿಷಯದ ಮೇಲೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ. ಸಂಸ್ಥೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಅಲ್ಪಾವಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅವಕಾಶ ಕಲ್ಪಿಸಿ ಇಲಾಖಾ ಅನುಮತಿ ನೀಡುವಂತೆ ಕೋರಿರುತ್ತಾರೆ.

ಸದರಿ ತರಬೇತಿ ಕಾರ್ಯಕ್ರಮವನ್ನು ಸಂಸ್ಥೆಯಲ್ಲಿ ಆಯೋಜಿಸಲು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಬೆಂಗಳೂರು.ಇವರು ಅನುಮತಿ ನೀಡಿರುವುದಾಗಿ ತಿಳಿಸಿದ್ದು, ಸದರಿ ಕಾರ್ಯಾಗಾರದಲ್ಲಿ ಭಾಗವಹಿಸಲು ಇಚ್ಛಿಸಿರುವ ಸಿಬ್ಬಂದಿಗಳ ಹೆಸರುಗಳ ಪಟ್ಟಿಯನ್ನು ಸಹ ಲಗತ್ತಿಸಿ, ಸದರಿ ಪಟ್ಟಿಗೂ ಸಹ ಅನುಮೋದನೆ ನೀಡಲು ಕೋರಿರುತ್ತಾರೆ.

ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವಂತೆ, ಸದರಿ ತರಬೇತಿಯನ್ನು ಆಯೋಜಿಸಲು ಹಾಗೂ ತರಬೇತಿಗೆ ಆಯ್ಕೆಗೊಂಡ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳ ಪಟ್ಟಿಗೆ ಅನುಮೋದನೆ ನೀಡಲಾಗಿದೆ. ಹಾಗೂ ದೈನಂದಿನ ಶೈಕ್ಷಣಿಕ ಕಾರ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಸಂಸ್ಥೆಯ ಪ್ರಾಂಶುಪಾಲರ ಅನುಮತಿ ಮೇರೆಗೆ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು (ಸಿಡಿಸಿ)

ಇವರಿಗೆ,

1) ಪ್ರಾಚಾರ್ಯರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ. -ಇವರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ:

1) ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2) ಇಲಾಖೆಯ ಇ-ಆಡಳಿತ ವಿಭಾಗಕ್ಕೆ ವೆಬ್-ಸೈಟ್‌ನಲ್ಲಿ ಪ್ರಕಟಿಸಲು